## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 74 |
| 2. | ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್ |
| 3. | ಉತ್ತರಿಸಬೇಕಾದ ದಿನಾಂಕ | : | 09.07.2018 |
| 4. | ಉತ್ತರಿಸಬೇಕಾದ ಸಚಿವರು | : | ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ರಾಜೀವ್‌ಗಾಂಧಿ ವೈದ್ಯಕೀಯ ಮಹಾವಿದ್ಯಾಲಯವನ್ನು ರಾಮನಗರ ಜಿಲ್ಲೆಗೆ ವರ್ಗಾವಣೆ ಮಾಡಲು ನಿರ್ಧರಿಸಲಾಗಿದೆಯೇ; ಈ ವಿಚಾರದಲ್ಲಿ ಆಗಿರುವ ಪ್ರಗತಿ ಏನು; (ಸಂಪೂರ್ಣ ವಿವರ ನೀಡುವುದು) | ಹೌದು. ಕರ್ನಾಟಕ ರಾಜ್ಯ ಪತ್ರ ಸಂಖ್ಯೆ: ಸಂವ್ಯಶಾಇ 25 ಶಾಸನ 2007, ದಿನಾಂಕ: 10ನೇ ಆಗಸ್ಟ್ 2007 ರಲ್ಲಿ ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿದ್ದ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ರಾಮನಗರಕ್ಕೆ ಬದಲಾವಣೆ ಮಾಡಿ ಅಧಿಸೂಚನೆಯನ್ನು ಹೊರಡಿಸಲಾಗಿದೆ. |
| (ಆ) | ಸದರಿ ವಿದ್ಯಾಲಯವನ್ನು ರಾಮನಗರಕ್ಕೆ ವರ್ಗಾವಣೆ ಮಾಡಿದಲ್ಲಿ, ಅಲ್ಲಿ ಕಟ್ಟಡದ ಸಹಿತ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹೊಸದಾಗಿ ಕಲ್ಪಿಸಲು<br>ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಈ ಉದ್ದೇಶಕ್ಕೆ ಸರ್ಕಾರ ಮೀಸಲಿಟ್ಟಿರುವ ಮೊತ್ತ ಎಷ್ಟು; ಹಾಲಿ ಕಾರ್ಯನಿರ್ವಹಿಸುತ್ತಿರುವ ಸ್ಥಳದಲ್ಲಿ ಮೂಲಭೂತ ಸೌಲಭ್ಯಗಳನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗುವುದು? | ರಾಮನಗರದ ಅರ್ಚಕರಹಳ್ಳಿಯಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಸ್ಥಾಪನೆಗಾಗಿ ಸರ್ಕಾರವು 216 ಎಕರೆ 24 ಗುಂಟೆ ಜಮೀನನ್ನು ಕರ್ನಾಟಕ ಕೈಗಾರಿಕಾಭಿವೃದ್ಧಿ ಮಂಡಳಿಯಿಂದ ಸ್ವಾಧೀನಪಡಿಸಿಕೊಳ್ಳಲಾಗಿದೆ. ಈ ಪೈಕಿ 145 ಎಕರೆ 09 ಗುಂಟೆ ಜಮೀನು ಋಣಭಾರರಾಹಿತ್ಯವಾಗಿರುತ್ತದೆ.<br><br>ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕ್ಯಾಂಪಸ್ & ಇತರೆ ಪೂರಕ ಕಟ್ಟಡಗಳ ನಿರ್ಮಾಣ ಕಾಮಗಾರಿಯ ರೂ. 580.00 ಕೋಟಿಗಳ ಪರಿಷ್ಕೃತ ಸವಿವರ ಅಂದಾಜು ಪಟ್ಟಿಗೆ ದಿ: 17-05-2016 ರಂದು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶ ಹೊರಡಿಸಲಾಗಿದ್ದು, ಸದರಿ ಹಣವನ್ನು ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ಸಂಪನ್ಮೂಲದಿಂದ ಭರಿಸಲು ಸೂಚಿಸಿದೆ.<br><br>ಸರ್ಕಾರದ ಮುಖ್ಯ ವಾಸ್ತುಶಿಲ್ಪಿಗಳು ವಿಶ್ವವಿದ್ಯಾಲಯದ ಕೇಂದ್ರ ಕಛೇರಿ ಹಾಗೂ ವೈದ್ಯಕೀಯ, ದಂತ ವೈದ್ಯಕೀಯ & ಇತರೆ ಕಾಲೇಜುಗಳ ಕಟ್ಟಡದ ವಾಸ್ತುಶಿಲ್ಪವನ್ನು ಸಿದ್ಧಪಡಿಸಿದ್ದು, ಸರ್ಕಾರವು ಸದರಿ ವಾಸ್ತುಶಿಲ್ಪಗಳಿಗೆ ಅನುಮೋದನೆ ನೀಡಿರುತ್ತದೆ.<br><br>ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕ್ಯಾಂಪಸ್ & ಪೂರಕ ಕಟ್ಟಡಗಳ ಕಾಮಗಾರಿ ಪೂರ್ಣಗೊಳ್ಳುವವರೆಗೆ ವಿಶ್ವವಿದ್ಯಾಲಯದ ಆಡಳಿತಾತ್ಮಕ ಬ್ಲಾಕ್ ಅನ್ನು ತಾತ್ಕಾಲಿಕವಾಗಿ ರಾಮನಗರದ ಕಂದಾಯ ಭವನಕ್ಕೆ ಸ್ಥಳಾಂತರಿಸಲು ಸರ್ಕಾರದ ಆದೇಶ ಸಂಖ್ಯೆ: ಆಕುಕ 117 ಎಂಪಿಎಸ್ 2007, ದಿನಾಂಕ: 08/02/2017 ರಲ್ಲಿ ಆದೇಶಿಸಿದೆ. ಅದರನ್ವಯ ಜಿಲ್ಲಾಧಿಕಾರಿಗಳು, ರಾಮನಗರ ಇವರು ಕಂದಾಯ ಭವನವನ್ನು ವಿಶ್ವವಿದ್ಯಾಲಯದ ವಶಕ್ಕೆ ನೀಡಲಾಗಿದ್ದು, ಸದರಿ |

| | | |
|---|---|---|
| | | ಕಂದಾಯ ಭವನದಲ್ಲಿ 107600 ಚದರ ಅಡಿ ಜಾಗ ಲಭ್ಯವಿದ್ದು, ಸದರಿ ಕಟ್ಟಡವನ್ನು ವಿಶ್ವವಿದ್ಯಾಲಯದ ಅವಶ್ಯಕತೆಗೆ ತಕ್ಕಂತೆ ಮಾರ್ಪಾಡು ಮಾಡಲು ವಿಶ್ವವಿದ್ಯಾಲಯವು ದಿನಾಂಕ: 15/07/2017 ರಂದು ಟೆಂಡರ್ ಕರೆದು ಕಡಿಮೆ ದರ ನಮೂದಿಸಿದ ಸಂಸ್ಥೆಗೆ ಕಾರ್ಯಾದೇಶವನ್ನು ನೀಡಿ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ.<br><br>ಪ್ರಸ್ತುತ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಕಾರ್ಯನಿರ್ವಹಿಸುತ್ತಿರುವ ಕಟ್ಟಡವು ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆಗೆ ಸಂಬಂಧಿಸಿದ್ದು, ಆಡಳಿತಾತ್ಮಕ ಬ್ಲಾಕ್ ಸಂಪೂರ್ಣವಾಗಿ ಕಂದಾಯ ಭವನಕ್ಕೆ ಸ್ಥಳಾಂತರಗೊಂಡ ನಂತರ ಸದರಿ ಕಟ್ಟಡದ ಬಳಕೆಯ ಬಗ್ಗೆ ಸರ್ಕಾರವು ನಿರ್ಣಯ ಕೈಗೊಳ್ಳುವುದು. |

ಸಂಖ್ಯೆ: ಆಕುಕ 208 ಆರ್‌ಜಿಯು 2018

(ಡಿ.ಕೆ.ಶಿವಕುಮಾರ್)
ವೈದ್ಯಕೀಯ ಶಿಕ್ಷಣ ಸಚಿವರು